A-PDF Merger DEMO : Purchase from www.A-PDF.com to remove the watermark

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2012-13ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯ ಉಪಯೋಜನೆಯ ಕ್ರೋಢೀಕೃತ ಅನುದಾನದಲ್ಲಿ ಪರಿಶಿಷ್ಟ ಜಾತಿಯವರ ಕಾಲೋನಿಗಳಲ್ಲಿ ಕಾಂಕ್ರೀಟ್ ರಸ್ತೆ ಬದಲಾಗಿ "ಇಂಟರ್ ಲಾಕಿಂಗ್ ಪೇವರ್ಸ್" ನ್ನು ಅಳವಡಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಸಕಇ 55 ಎಸ್‌ಎಲ್‌ಪಿ 2011, ದಿನಾಂಕ: 26-05-2011.

2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಪತ್ರ ಸಂಖ್ಯೆ:ಸಕನಿ/ಮೂಲಭೂತ/ಸಿಆರ್-16/2013-14, ದಿನಾಂಕ: 06-02-2014.

****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಆದೇಶದಲ್ಲಿ ಪರಿಶಿಷ್ಟ ಜಾತಿಯ ಕಾಲೋನಿಗಳಲ್ಲಿ ಕೈಗೊಳ್ಳಬೇಕಾಗಿರುವ ಕಾಮಗಾರಿಗಳಲ್ಲಿ ರಸ್ತೆ ಕಾಮಗಾರಿ ಕುರಿತಂತೆ ಕಡ್ಡಾಯವಾಗಿ ಕಾಂಕ್ರಿಟ್ ರಸ್ತೆ ನಿರ್ಮಾಣ ಮಾಡಲು ಸ್ಪಷ್ಟವಾಗಿ ತಿಳಿಸಲಾಗಿರುತ್ತದೆ.

ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿನ ಪತ್ರದಲ್ಲಿ, ಚಿಕ್ಕೋಡಿ-ಸದಲಗಾ ಮತ ಕ್ಷೇತ್ರದ ವ್ಯಾಪ್ತಿಗೆ ಒಳಪಡುವ ವಿವಿಧ ಗ್ರಾಮಗಳ ಪರಿಶಿಷ್ಟ ಜಾತಿ ಕಾಲೋನಿಗಳಲ್ಲಿ ಕಿರಿದಾದ ರಸ್ತೆ ಇರುವುದರಿಂದ ಕಾಂಕ್ರಿಟ್ ರಸ್ತೆ ಕಾಮಗಾರಿಯನ್ನು ಕೈಗೊಳ್ಳುವ ಬದಲಾಗಿ "ಇಂಟರ್ ಲಾಕಿಂಗ್ ಪೇವರ್ಸ್" ಅಳವಡಿಸುವ ಕುರಿತು ಜಿಲ್ಲಾಧಿಕಾರಿ, ಬೆಳಗಾಂ ಜಿಲ್ಲೆ ಇವರು ಕೋರಿದ್ದು, ಈ ಬಗ್ಗೆ ವ್ಯವಸ್ಥಾಪಕರು, ಕೆಆರ್‌ಐಡಿಎಲ್ ಇವರು ಸಹ ತಾಂತ್ರಿಕ ವರದಿಯನ್ನು ಸಲ್ಲಿಸಿ, ಕಾಂಕ್ರಿಟ್ ರಸ್ತೆಯ ಬದಲಾಗಿ "ಇಂಟರ್ ಲಾಕಿಂಗ್ ಪೇವರ್ಸ್" ಅಳವಡಿಸುವದು ಸೂಕ್ತವೆಂದು ಅಭಿಪ್ರಾಯ ಪಟ್ಟಿರುವುದಾಗಿ ತಿಳಿಸಿ, ಸರ್ಕಾರದ ಆದೇಶ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಕಇ 48 ಎಸ್‌ಎಲ್‌ಪಿ 2014, ಬೆಂಗಳೂರು ದಿನಾಂಕ: 20-02-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ, ಚಿಕ್ಕೋಡಿ-ಸದಲಗಾ ಮತಕ್ಷೇತ್ರಕ್ಕೆ ಸೀಮಿತಗೊಳಿಸಿ ಪ್ರಾಯೋಗಿಕವಾಗಿ ಕಾಂಕ್ರಿಟ್ ರಸ್ತೆಗಳನ್ನು ಮಾಡುವ ಜೊತೆಗೆ ಅವಶ್ಯಕತೆ ಇರುವ ಕಡೆ ಮಾತ್ರ "ಇಂಟರ್ ಲಾಕಿಂಗ್ ಪೇವರ್ಸ್" ಗಳನ್ನು ಸಹ ಅಳವಡಿಸಲು ವಿಶೇಷ ಪ್ರಕರಣವೆಂದು ಪರಿಗಣಿಸಿ ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಸದರಿ ಕಾಮಗಾರಿಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಗಳಲ್ಲಿನ ಪಾರದರ್ಶಕತೆ ಅಧಿನಿಯಮ 1999 ಹಾಗೂ ಅದರಡಿ ರೂಪಿಸಿರುವ ನಿಯಮಗಳಲ್ಲಿ ನಮೂದಿಸಿರುವ ಕಾರ್ಯವಿಧಾನವನ್ನು ಅನುಸರಿಸಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸತಕ್ಕದ್ದು.

ಸದರಿ ಕಾಮಗಾರಿಗಳನ್ನು ಎರಡು ವರ್ಷಗಳೊಳಗಾಗಿ ಪೂರ್ಣಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ

<u>ಇವರಿಗೆ</u>:-

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3) ಜಿಲ್ಲಾಧಿಕಾರಿ, ಬೆಳಗಾಂ ಜಿಲ್ಲೆ.
4) ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಳಗಾಂ.
5) ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ಬೆಳಗಾಂ ಜಿಲ್ಲೆ.
6) ಶಾಖಾ ರಕ್ಷಾ ಕಡತ.
7) ಹೆಚ್ಚುವರಿ ಪ್ರತಿಗಳು-03.